# ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ

ದೇವರಾಜ ಅರಸು ಭವನ, 4ನೇ ಮಹಡಿ, ನಂ 16ಡಿ, ಮಿಲ್ಲರ್ ಟ್ಯಾಂಕ್ ಬೆಡ್ ಏರಿಯಾ, ವಸಂತನಗರ, ಬೆಂಗಳೂರು– 52

ಸಂಖ್ಯೆ: ದೇಹಿನಿ/ಸ/ಎನ್.ಬಿ.ಸಿ.ಎಫ್.ಡಿ.ಸಿ./ಆರ್–24/2019–20 ದಿನಾಂಕ:26/12/2019

## ಪ್ರಕಟಣೆ

ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ ಹಿಂದುಳಿದ ವರ್ಗಗಳ ಜನರ ಆರ್ಥಿಕ ಅಭಿವೃದ್ಧಿಗಾಗಿ 2019–20ನೇ ಸಾಲಿನಲ್ಲಿ ಅನುಷ್ಠಾನಗೊಳಿಸುತ್ತಿರುವ ಕೇಂದ್ರ ರಾಷ್ಟ್ರೀಯ ಹಿಂದುಳಿದ ವರ್ಗಗಳ ಹಣಕಾಸು ಮತ್ತು ಅಭಿವೃದ್ಧಿ ನಿಗಮದ ಸಹಯೋಗದೊಂದಿಗೆ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳಲ್ಲಿ ಸೌಲಭ್ಯ ಪಡೆಯ ಬಯಸುವವರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ನಿಗದಿತ ಅರ್ಜಿ ನಮೂನೆಗಳನ್ನು ನಿಗಮದ ಜಿಲ್ಲಾ ವ್ಯವಸ್ಥಾಪಕರ ಕಛೇರಿಯಲ್ಲಿ ಅಥವಾ ಆಯಾ ತಾಲ್ಲೂಕಿನ ಹಿಂದುಳಿದ ವರ್ಗಗಳ ಕಲ್ಯಾಣ ವಿಸ್ತರಣಾಧಿಕಾರಿಗಳ ಕಛೇರಿಯಲ್ಲಿ ಅರ್ಜಿ ಪಡೆದು ಹಾಗೂ ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ ದಾಖಲಾತಿಗಳೊಂದಿಗೆ ಸಲ್ಲಿಸಲು **ಕೊನೆಯ ದಿನಾಂಕ:31/01/2020.**

**ಒಂದು ಬಾರಿ ನಿಗಮದ ಯಾವುದಾದರು ಯೋಜನೆಯಲ್ಲಿ ಪ್ರಯೋಜನ ಪಡೆದಿದ್ದಲ್ಲಿ ಅಂತಹವರು ಹಾಗೂ ಅವರ ಕುಟುಂಬದವರು ಮತ್ತೊಮ್ಮೆ ಸೌಲಭ್ಯ ಕೋರಿ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ. ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.**

**ಯೋಜನೆಗಳಲ್ಲಿ ಸೌಲಭ್ಯ ಪಡೆಯಲು ಹೊಂದಿರಬೇಕಾದ ಸಾಮಾನ್ಯ ಅರ್ಹತೆಗಳು.**(1)ಅರ್ಜಿದಾರರು ಹಿಂದುಳಿದ ವರ್ಗಗಳ ಪ್ರವರ್ಗ–1, 2ಎ, 3ಎ ಮತ್ತು 3ಬಿಗೆ ಸೇರಿದವರಾಗಿರಬೇಕು.(ವಿಶ್ವಕರ್ಮ ಅದರ ಉಪ ಸಮುದಾಯಗಳನ್ನು ಮತ್ತು ಮತಿಯ ಅಲ್ಪಸಂಖ್ಯಾತರನ್ನು ಹೊರತುಪಡಿಸಿ) (2)ಅರ್ಜಿದಾರರ ಮತ್ತು ಅವರ ಕುಟುಂಬದ ವಾರ್ಷಿಕ ವರಮಾನ ರೂ.3,00,000/–ಗಳು. (4)ಅರ್ಜಿದಾರರ ವಯಸ್ಸು 18 ರಿಂದ 55 ವರ್ಷಗಳ ಮಿತಿಯಲ್ಲಿರಬೇಕು. (5)ಅರ್ಜಿದಾರರು ಆಧಾರ್ ಸಂಖ್ಯೆ ಹೊಂದಿರಬೇಕು. (6)ಅರ್ಜಿದಾರರ ಐ.ಎಫ್.ಸಿ. ಕೋಡ್ ಹೊಂದಿರುವ ರಾಷ್ಟ್ರೀಕೃತ/ಗ್ರಾಮೀಣ ಬ್ಯಾಂಕ್ ಖಾತೆಗಳನ್ನು ಹೊಂದಿರಬೇಕು.

**ರಾಷ್ಟ್ರೀಯ ಹಿಂದುಳಿದ ವರ್ಗಗಳ ಹಣಕಾಸು ಮತ್ತು ಅಭಿವೃದ್ಧಿ ನಿಗಮದ ಸಾಲ ಯೋಜನೆಗಳು:**

- **ಅವಧಿಸಾಲ ಯೋಜನೆಗಳು:** ಕೃಷಿ ಮತ್ತು ಕೃಷಿ ಅವಲಂಬಿತ ಚಟುವಟಿಕೆಗಳಿಗೆ, ಸಣ್ಣ ವ್ಯಾಪಾರ/ಸಾಂಪ್ರದಾಯಿಕ ವೃತ್ತಿದಾರರು ಮತ್ತು ಕುಶಲಕರ್ಮಿಗಳಿಗೆ, ಸೇವಾ ವಲಯ, ಸಾರಿಗೆ ವಲಯದಲ್ಲಿ (ಆಟೋರಿಕ್ಷ/ಗೂಡ್ಸ್ ಆಟೋರಿಕ್ಷ) ಹಾಗೂ ವೃತ್ತಿಪರ ಮತ್ತು ತಾಂತ್ರಿಕ ಉದ್ಯಮ/ಕೋರ್ಸ್‌ಗಳಲ್ಲಿ ಹಿಂದುಳಿದ ವರ್ಗಗಳ ಜನರು ಸ್ವಯಂ ಉದ್ಯೋಗ ಕೈಗೊಳ್ಳಲು ಆಯಾ ವಲಯದ ಅನುಮೋದಿತ ಘಟಕ ವೆಚ್ಚದ ಮಿತಿಗೊಳಪಟ್ಟು ಗರಿಷ್ಠ ರೂ.15.00ಲಕ್ಷ ಗಳವರೆಗೆ ವಾರ್ಷಿಕ ಶೇಕಡ 6 ರಿಂದ 8ರ ಬಡ್ಡಿದರದಲ್ಲಿ ಸಾಲ ಮಂಜೂರು ಮಾಡಲಾಗುವುದು.
- **ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಕಡಿಮೆ ಬಡ್ಡಿದರದಲ್ಲಿ ಶೈಕ್ಷಣಿಕ ಸಾಲ:** AICTE, Medical Council of India, UGC ಮುಂತಾದ ನೊಂದಾಯಿತ ಏಜೆನ್ಸಿಗಳು ಮತ್ತು ಅನುಮೋದಿತ ಹೊಂದಿದ ವೃತ್ತಿಪರ ತಾಂತ್ರಿಕ ಕೋರ್ಸ್‌ಗಳಲ್ಲಿ ಅರ್ಹತ ಪರೀಕ್ಷೆಯಲ್ಲಿ ಶೇ50ರಷ್ಟು ಅಂಕಪಡೆದು ಪ್ರವೇಶ ಹೊಂದಿದ ವಿದ್ಯಾರ್ಥಿಗಳಿಗೆ ವಾರ್ಷಿಕ ರೂ.15.00ಲಕ್ಷ ಅಥವಾ ಕೋರ್ಸ್‌ನ ಅವಧಿಗೆ ಒಟ್ಟು ರೂ.15.00ಲಕ್ಷ ಸಾಲ ಮಂಜೂರು. ಶೇ.4ರ ಬಡ್ಡಿ ದರ.

  ವಿದೇಶಗಳಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳಿಗೆ ಕೋರ್ಸ್‌ನ ಅವಧಿಗೆ ರೂ.20.00ಲಕ್ಷ ಸಾಲ ಶೇ.4ರ ಬಡ್ಡಿದರ ಹಾಗು ವಿದ್ಯಾರ್ಥಿನಿಯರಿಗೆ ಶೇ.3.5ರ ಬಡ್ಡಿದರ.
- **ನ್ಯೂ ಸ್ವರ್ಣಿಮಾ ಯೋಜನೆ:** ಹಿಂದುಳಿದ ವರ್ಗಗಳ ಮಹಿಳೆಯರಿಗೆ ಆದಾಯ ತರುವಂತಹ ಆರ್ಥಿಕ ಉದ್ದೇಶಗಳಿಗೆ, ಘಟಕ ವೆಚ್ಚ ಆಧರಿಸಿ ಗರಿಷ್ಠ ಪ್ರತಿ ಫಲಾನುಭವಿಗೆ ರೂ.2,00,000/–ಗಳ ಸಾಲ ಶೇ.5ರ ಬಡ್ಡಿ ದರ.
- **ಮೈಕ್ರೋ ಫೈನಾನ್ಸ್ ಸಾಲ ಯೋಜನೆ:** ಗರಿಷ್ಠ 20 ಸದಸ್ಯರನ್ನೊಳಗೊಂಡ ಹಿಂದುಳಿದ ವರ್ಗಗಳ ಸ್ವ ಸಹಾಯ ಗುಂಪುಗಳ ಮೂಲಕ ಆದಾಯ ತರುವಂತಹ ಆರ್ಥಿಕ ಉದ್ದೇಶಗಳಿಗೆ, ಘಟಕ ವೆಚ್ಚ ಆಧರಿಸಿ ಗರಿಷ್ಠ ಪ್ರತಿ ಫಲಾನುಭವಿಗೆ ರೂ.1,00,000/–ಗಳ ಸಾಲ ಶೇ. 5ರ ಬಡ್ಡಿ ದರ.

- **ಮಹಿಳಾ ಸಮೃದ್ಧಿ ಯೋಜನೆ:** ಗರಿಷ್ಠ 20 ಸದಸ್ಯರನ್ನೊಳಗೊಂಡ ಹಿಂದುಳಿದ ವರ್ಗಗಳ ಮಹಿಳಾ ಸ್ವ ಸಹಾಯ ಗುಂಪುಗಳು/ಸ್ತ್ರೀ ಶಕ್ತಿ ಗುಂಪುಗಳು, ಸ್ವ ಶಕ್ತಿ ಗುಂಪುಗಳ ಮೂಲಕ ಆದಾಯ ತರುವಂತಹ ಆರ್ಥಿಕ ಉದ್ದೇಶಗಳಿಗೆ, ಘಟಕ ವೆಚ್ಚ ಆಧರಿಸಿ ಗರಿಷ್ಠ ಪ್ರತಿ ಫಲಾನುಭವಿಗೆ ರೂ.35,000/-ಗಳ ಸಾಲ ಶೇ. 4ರ ಬಡ್ಡಿ ದರ.
- **ಚಿಕ್ಕ ಸಾಲ ಯೋಜನೆ:** ಹಿಂದುಳಿದ ವರ್ಗಗಳ ಜನರು ಸ್ವಯಂ ಉದ್ಯೋಗ ಕೈಗೊಳ್ಳಲು ಸಣ್ಣ ವ್ಯಾಪಾರ ಕೈಗೊಳ್ಳಲು ಘಟಕ ವೆಚ್ಚ ಆಧರಿಸಿ ಗರಿಷ್ಠ ಪ್ರತಿ ಫಲಾನುಭವಿಗೆ ರೂ.1,00,000/-ಗಳ ಸಾಲ ಶೇ.6ರ ಬಡ್ಡಿ ದರ.

ಮೇಲ್ಕಂಡ ಸೌಲಭ್ಯಗಳನ್ನು ಪಡೆಯಲು ಇಚ್ಛಿಸುವ ಹಿಂದುಳಿದ ವರ್ಗದ ಫಲಾಪೇಕ್ಷಿಗಳು, ಅವರು ವಾಸಿಸುತ್ತಿರುವ ಆಯಾ ಜಿಲ್ಲೆಯ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರ ಕಛೇರಿ ಅಥವಾ ಆಯಾ ತಾಲ್ಲೂಕಿನ ಹಿಂದುಳಿದ ವರ್ಗಗಳ ವಿಸ್ತರಣಾಧಿಕಾರಿಗಳ ಕಛೇರಿಯಲ್ಲಿ ನಿಗದಿಪಡಿಸಿದ ಉಚಿತ ಅರ್ಜಿಗಳನ್ನು ಪಡೆಯಬಹುದು ಹಾಗೂ ನಿಗಮದ ವೆಬ್ ಸೈಟ್ www.karnataka.gov.in/dbcdc ಇಲ್ಲಿ ಪಡೆಯಬಹುದಾಗಿರುತ್ತದೆ. ***ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ/ದಾಖಲಾತಿಗಳೊಂದಿಗೆ ದಿನಾಂಕ:31/01/2020 ರೊಳಗೆ ಸಲ್ಲಿಸುವುದು.*** ದಿನಾಂಕ:31/01/2020ರ ನಂತರ ಬರುವ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ನಿಗಮದ ವೆಬ್ ಸೈಟ್: www.karnataka.gov.in/dbcdc ಸಂಪರ್ಕಿಸಬಹುವುದು.

(ಜಿ.ಜಗದೀಶ್)
ವ್ಯವಸ್ಥಾಪಕ ನಿರ್ದೇಶಕರು.

ಪ್ರತಿಯನ್ನು:

1. ಸರ್ಕಾರದ ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಮತ್ತು ಮಾನ್ಯ ಅಧ್ಯಕ್ಷರು ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ರವರಿಗೆ ಮಾಹಿತಿಗಾಗಿ.
2. ಎಲ್ಲಾ ಸಹಾಯಕ ಪ್ರಧಾನ ವ್ಯವಸ್ಥಾಪಕರು/ವಿಭಾಗೀಯ ವ್ಯವಸ್ಥಾಪಕರು, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಇವರಿಗೆ ಮಾಹಿತಿಗೆ ಹಾಗೂ ಸೂಕ್ತ ಕ್ರಮಕ್ಕಾಗಿ.
3. ಎಲ್ಲಾ ಜಿಲ್ಲಾ ವ್ಯವಸ್ಥಾಪಕರು, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಇವರಿಗೆ ಮಾಹಿತಿಗೆ ಹಾಗೂ ಸೂಕ್ತ ಕ್ರಮಕ್ಕಾಗಿ.
4. ನಿಗಮದ ಕೇಂದ್ರ ಕಛೇರಿ ಎಲ್ಲಾ ಅಧಿಕಾರಿ/ಸಿಬ್ಬಂದಿಯವರಿಗೆ ಮಾಹಿತಿಗಾಗಿ.
5. ಕಂಪ್ಯೂಟರ್ ಪ್ರೋಗ್ರಾಮರ್, ಕೇಂದ್ರ ಕಛೇರಿ ಇವರಿಗೆ ಮಾಹಿತಿಗಾಗಿ ಹಾಗೂ ನಿಗಮದ ವೆಬ್ ಸೈಟ್‌ನಲ್ಲಿ ಅಪ್‌ಲೋಡ್ ಮಾಡುವ ಸಲುವಾಗಿ.
6. ನಿಗಮದ ಸೂಚನಾ ಫಲಕಕ್ಕೆ